ಕರ್ನಾಟಕ ಸರ್ಕಾರ
GOVERNMENT OF KARNATAKA

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯಪಡೆ ಮುಖ್ಯಸ್ಥರು)ರವರ ಕಚೇರಿ
Office of the
Principal Chief Conservator of Forests
(Head of Forest Force)

ಅರಣ್ಯಭವನ, 18ನೇಅಡ್ಡ ರಸ್ತೆ
ಮಲ್ಲೇಶ್ವರಂ, ಬೆಂಗಳೂರು-560003
Aranya Bhavan, 18th Cross
Malleshwaram, Bengaluru- 03
Telephone: 080 23367123
Email:apccfpr@gmail.com

ಕಡತ ಸಂಖ್ಯೆ: ಬಿ2/ಸಿಇವಿ/ಸಿಆರ್-65/2023-24
E-OFFICE NO. KFD/HOFF/B2(ENQ)/108/2023-LEGAL-KFD

**E- 1228659**
Date: 08-11-2023

## ಸುತ್ತೋಲೆ

**ವಿಷಯ:-** ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಅವಧಿಯಲ್ಲಿ ಸರ್ಕಾರಿ ಕಟ್ಟಡ ನಿರ್ಮಾಣದ ಶಂಕುಸ್ಥಾಪನೆ, ಕಟ್ಟಡ ಉದ್ಘಾಟನೆ ಮುಂತಾದ ಕಾರ್ಯಕ್ರಮಗಳನ್ನು ನಿಷೇಧಿಸುವ ಕುರಿತು.

ಸರ್ಕಾರಿ ಅನುದಾನವನ್ನು ಉಪಯೋಗಿಸಿಕೊಂಡು ನಿರ್ಮಾಣ ಮಾಡಿದ ಕಟ್ಟಡಗಳ ಶಂಕುಸ್ಥಾಪನೆ, ಕಟ್ಟಡ ಉದ್ಘಾಟನೆ ಮುಂತಾದ ಕಾರ್ಯಕ್ರಮಗಳಿಗೆ ಸ್ಥಳೀಯ ಜನಪ್ರತಿನಿಧಿಗಳನ್ನು ಆಹ್ವಾನಿಸಬೇಕಾಗಿರುತ್ತದೆ. ಆದರೆ ಸದರಿ ಜನಪ್ರತಿನಿಧಿಗಳನ್ನು ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಸಂದರ್ಭದಲ್ಲಿ ಆಹ್ವಾನಿಸಲು ಅವಕಾಶ ಇರುವುದಿಲ್ಲ ಜನಪ್ರತಿನಿಧಿಗಳನ್ನು ಆಹ್ವಾನಿಸದೇ ಸರ್ಕಾರಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಶಿಷ್ಟಾಚಾರವಾಗಿರುವುದಿಲ್ಲ. ಆದುದರಿಂದ ಅಂತಹ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಈ ಕೆಳಕಂಡಂತೆ ಸೂಚನೆಗಳನ್ನು ನೀಡಿದೆ.

1. ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಅವಧಿಯಲ್ಲಿ ಯಾವುದೇ ಸರ್ಕಾರಿ ಕಟ್ಟಡಗಳ ನಿರ್ಮಾಣದ ಶಂಕುಸ್ಥಾಪನೆ, ಕಟ್ಟಡಗಳ ಉದ್ಘಾಟನೆ ಮುಂತಾದ ಯಾವುದೇ ಕಾರ್ಯಕ್ರಮವನ್ನು ಆದಷ್ಟು ಮಟ್ಟಿಗೆ ಹಮ್ಮಿಕೊಳ್ಳಬಾರದು.
2. ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಅವಧಿಯಲ್ಲಿ ಯಾವುದಾದರೂ ಸರ್ಕಾರಿ ಕಟ್ಟಡಗಳು ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದಲ್ಲಿ ಮತ್ತು ಅದನ್ನು ಬಳಕೆಗೆ ತರುವುದು ಅತ್ಯವಶ್ಯಕತೆ ಎನಿಸಿದ ಪಕ್ಷದಲ್ಲಿ ಸಂಬಂಧಪಟ್ಟ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಲಿಖಿತ ಅನುಮತಿಯನ್ನು ಪಡೆಯತಕ್ಕದ್ದು.

08/11/23

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯಪಡೆ ಮುಖ್ಯಸ್ಥರು)

**ಪ್ರತಿ:**

1. ಎಲ್ಲಾ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು.
2. ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು.
3. ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು/ ಅರಣ್ಯ ಸಂರಕ್ಷಣಾಧಿಕಾರಿಗಳು.
4. ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು.
5. ಎಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು. — ಇಲಾಖಾ ವೆಬ್ ಸೈಟ್ ಮುಖಾಂತರ.
6. ಎಲ್ಲಾ ವಲಯ ಅರಣ್ಯಾಧಿಕಾರಿಗಳು.
7. ಕಚೇರಿ ಕಡತಕ್ಕೆ.